ಸೋಮವಾರ 25.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 32
Digital Varthe Kannada Daily Volume 01 - Issue 32 Monday 25.08.2025 Price: 5/- Rs 2 Pages Bangalore

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

www.digitalvarthe.com

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ಆಶಾ-ಅಂಗನವಾಡಿ ಕಾರ್ಯಕರ್ತೆಯರಿಗೆ ಬಾಗಿನ ಸೋದರನೆಂದು ಹರಸಿ ಹಾರೈಸಿದ ಮಹಿಳೆಯರು



### ಜಗದೀಶ್ ಚೌದರಿ ಕಾರ್ಯಕ್ಕೆ ಮೆಚ್ಚುಗೆಯ ಮಹಾಪೂರ

ನೆಲಮಂಗಲ: ಸಹೋದರ ಸಹೋದರಿಯರರು ವೈಮನಸ್ಯ ಬಿಟ್ಟು ಒಗ್ಗೂಡಿದ್ದಾಗ ಮಾತ್ರ ಪ್ರೀತಿ ಬಾಂಧವ್ಯ ಹೆಚ್ಚಾಗುತ್ತದೆ ಎಂದು ಬಿಜೆಪಿ ತಾಲೂಕು ಅಧ್ಯಕ್ಷ ಜಗದೀಶ್‌ಚೌಧರಿ ತಿಳಿಸಿದರು.

ತಾಲೂಕಿನ ಬಿಜೆಪಿ ಅದ್ಯಕ್ಷ ಜಗದೀಶ್‌ಚೌಧರಿ ನಿವಾಸದ ಬಳಿ ಕ್ಷೇತ್ರ ಬಿಜೆಪಿ ಪಕ್ಷದಿಂದ ಗೌರಿ ಗಣೇಶ ಹಬ್ಬದ ಹಿನ್ನಲೆ ಅಯೋಜಿಸಿದ್ದ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರಿಗೆ ಬಾಗಿನ ವಿತರಣಾ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.

ಕಳೆದ 7 ವರ್ಷದಿಂದ ಯಾವುದೇ ರಾಜಕೀಯ ದುರುದೇಷ ಇಲ್ಲದೆ ಗೌರಿ ಗಣೇಶ ಹಬ್ಬದ ಪ್ರಯುಕ್ತ ಸಮಾಜಕ್ಕಾಗಿ ಶ್ರಮಿಸುತ್ತಿರುವ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆರಿಗೆ ಬಾಗಿನ ನೀಡುವ ಕೆಲಸ ಮಾಡಲಾಗುತ್ತಿದೆ. ಸಹೋದರ ಸಹೋದರಿಯರು ಇತ್ತೀಚೆಗೆ ಹಣಕಾಸು, ಆಸ್ತಿ ವಿಚಾರವಾಗಿ ದೂರವಾಗುತ್ತಿದ್ದು ಬೇಸರ ಸಂಗತಿ. ವರ್ಷಕೊಮ್ಮೆ ಬರುವ ಗೌರಿ ಹಬ್ಬಕ್ಕೆ ಬಾಗಿನ ನೀಡುವ ಕೆಲಸ ಪ್ರತಿಯೊಬ್ಬ ಸಹೋದರರು ಮಾಡಬೇಕು. ಸಮಾಜದಲ್ಲಿ ಕೆಲ ಹೆಣ್ಣು ಮಕ್ಕಳಿಗೆ ಸಹೋದರಿಲ್ಲದೇ ಬಾಗಿನ ಪಡೆಯದೇ ನೋವು ಅನುಭವಿಸುತ್ತಿದ್ದು ಒಂದೆಡೆಯಾದರೇ ಸಹೋದರ ಇದ್ದರು ಇಲ್ಲದಂತೆ ನಡೆದುಕೊಳ್ಳುತ್ತಿದ್ದಾರೆ.

ಯಾವುದೇ ಸಮಸ್ಯೆ ಇದ್ದರೂ ಬಗ್ಗೆ ಹರಿಸಿಕೊಂಡು ಸಹೋದರ ಮನೋಭಾವ ಒಗ್ಗೂಡಿಕೊಂಡು ಹೋಗಬೇಕು. ಈ ನಿಟ್ಟಿನಲ್ಲಿ ನನ್ನ ಜೀವ ಇರುವವರೆಗೂ ಆಶಾ, ಅಂಗನವಾಡಿ ಕಾರ್ಯಕರ್ತೆರು ಹಾಗೂ ನಮ್ಮ ಪಕ್ಷದ ಸಹೋದರಿಯರಿಗೆ ಬಾಗಿನ ನೀಡುವ ಕೆಲಸ ನಿರಂತರವಾಗಿ ಮಾಡಲಾಗುವುದು ಎಂದರು.

ಮಹಿಳೆಯರಿಗೆ ಎಲ್ಲಾ ರೀತಿಯ ಸ್ವಾತಂತ್ರ್ಯ ನೀಡಿದ ಬಿಜೆಪಕ ಪಕ್ಷ ಮಹಿಳೆಯರಿಗೆ ವಿಶೇಷ ಗೌರವಗಳನ್ನು ನೀಡುತ್ತಾ ಬಂದಿದೆ. ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿ ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣ ಮಾಡುತ್ತಿದೆ. ಜತೆಗೆ ಭಾಗ್ಯಲಕ್ಷ್ಮೀ ಬಾಂಡ್ ಮೂಲಕ ಪ್ರತಿ ಕುಟುಂಬದಲ್ಲಿ ಜನಿಸಿದ್ದ ಹೆಣ್ಣು ಮಗುವಿಗೆ ಶಕ್ತಿ ತುಂಬವ ಕೆಲಸ ಬಿಜೆಪಿ ನೇತೃತ್ವದಲ್ಲಿ ಯಡಿಯೂರಪ್ಪ ಅವರು ಮಾಡಿದ್ದಾರೆ ಎಂದರು.

ಮಾಜಿ ಶಾಸಕ ಎಂ.ವಿ.ನಾಗರಾಜು ಮಾತನಾಡಿ ಹಿಂದೂ ಧರ್ಮದಲ್ಲಿ ಗೌರಿಗಣೇಶ ಹಬ್ಬ ಅತ್ಯಂಯ ಪವಿತ್ರ ಹಬ್ಬವಾಗಿದೆ. ಸಹೋದರರು ಸಹೋದರಿಯರಿಗೆ ಹಾಗೂ ತಂದೆ ತಮ್ಮ ಹೆಣ್ಣು ಮಕ್ಕಳನ್ನು ತವರೂ ಮನೆಗೆ ಕರೆದು ಬಾಗಿನ ನೀಡುವುದು ಈ ಹಬ್ಬದ ವಿಶೇಷತೆಯಾಗಿದೆ. ಕಳೆದ 7 ವರ್ಷದಿಂದ ಬಿಜೆಪಿ ತಾಲೂಕು ಅದ್ಯಕ್ಷ ಜಗದೀಶ್‌ಚೌಧರಿ ಅವರು ದುಡಿಮೆ ಸ್ವಲ್ಪ ಪ್ರಮಾಣದ ಹಣದಲ್ಲಿ ತಾಲೂಕಿನ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ಬಾಗಿನ ನೀಡುವ ಮಹತ್ವ ಕಾರ್ಯ ಮಾಡುತ್ತಿರುವುದು ಸಂತೋಷಕರ ಸಂಗತಿ.ಎಲ್ಲಾ ಮಹಿಳೆಯರು ಅವರಿಗೆ ಆಶೀರ್ವಾದ ನೀಡಬೇಕು ಮುಂದಿನಲ್ಲಿ ರಾಜಕೀಯದಲ್ಲಿ ಮತ್ತಷ್ಟು ಎತ್ತರ ಮಟ್ಟಕ್ಕೆ ಬೆಳೆದು ಮತ್ತಷ್ಟು ಸೇನೆ ಮಾಡುವ ಅವಕಾಶ ದೇವರು ಕರುಣಿಸಲಿ ಎಂದರು.

ಕಾರ್ಯಕ್ರಮದ ಪ್ರಯುಕ್ತ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರಿಗೆ ಬಿಜೆಪಿ ತಾಲೂಕು ಅದ್ಯಕ್ಷ ಜಗದೀಶ್‌ಚೌಧರಿ ಅವರು ಪತ್ನಿ ಜಯಲಕ್ಷ್ಮೀ ಅವರು ಅರಿಶಿನ-ಕುಂಕುಮ, ಸೀರೆ ಹಾಗೂ ಬಳೆಗಳನ್ನು ಮಹಿಳೆಯರಿಗೆ ವಿತರಿಸಿ ಎಲ್ಲರಿಗೂ ಸಿಹಿಯನ್ನು ಹಂಚಿ ಸಂಭ್ರಮಿಸಿದರು.

ಸಂದರ್ಭದಲ್ಲಿ ಬೆಂಗಳೂರು ಜಿಲ್ಲಾ ಪಂಚಾಯಿತಿ ಮಾಜಿ ಅದ್ಯಕ್ಷ ಮರಿಸ್ವಾಮಿ, ನೆ.ಯೋ.ಪ್ರಾಧಿಕಾರ ಮಾಜಿ ಅದ್ಯಕ್ಷ ಎಸ್.ಮಲ್ಲಯ್ಯ, ಬಿಜೆಪಿ ಜಿಲ್ಲಾದ್ಯಕ್ಷ ರಾಮಕೃಷ್ಣ , ತಾಲೂಕು ಪ್ರಧಾನ ಕಾರ್ಯದರ್ಶಿ ಸತೀಶ್, ಮಹಿಳಾ ಮೋರ್ಚಾ ಅದ್ಯಕ್ಷೆ ಮಂಜುಳಾಸುರೇಶ್, ಪ್ರಧಾನ ಕಾರ್ಯದರ್ಶಿ ಶೀಲಾ, ಗ್ರಾಮಪಂಚಾಯಿತಿ ಸದಸ್ಯ ಸಿದ್ದರಾಜು, ಮಾಜಿ ಸದಸ್ಯ ಜಗದೀಶ್, ಮುಖಂಡ ಅರುಣ್‌ಗೌಡ, ಸಂತೋಷ್, ನಾಗರಾಜು, ರಾಜಮ್ಮಪ್ರಕಾಶ್, ಮಂಜುಳಾದೇವಿ, ನಳಿನಾಕ್ಷಿ, ಲತಾ, ಮಂಜಮ್ಮ , ಸುಮ, ಸಿದ್ದರಾಜು, ಸಿದ್ದು, ಮೋಹನ್‌ಕುಮಾರ್, ಲಕ್ಷ್ಮೀಕಾಂತ್, ಮತ್ತಿತರರು ಉಪಸ್ಥಿತರಿದ್ದರು.

## ಬೈಕ್-ಕ್ಯಾಂಟರ್ ನಡುವೆ ಭೀಕರ ಅಪಘಾತ; ಇಬ್ಬರು ಸಾವು



ನೆಲಮಂಗಲ, ರಾಷ್ಟ್ರೀಯ ಹೆದ್ದಾರಿ-48 ರ ಹನುಮಂತಪುರ ಗೇಟ್ ಬಳಿ ಭಾನುವಾರ ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಅರಣ್ಯ ಇಲಾಖೆಯ

### ಮಂದಗತಿಯ ರಸ್ತೆ ಕಾಮಗಾರಿ, ವಾರಾಂತ್ಯದ ದಟ್ಟಣೆ ಅಪಘಾತಕ್ಕೆ ಕಾರಣ

ಗಾರ್ಡ್ ಸೇರಿದಂತೆ ಇಬ್ಬರು ದಾರುಣ ಸಾವನ್ನಪ್ಪಿದ್ದಾರೆ. ಅಪಘಾತದ ಮೂಲ ಕಾರಣವಾಗಿ ನಿಧಾನಗತಿಯಲ್ಲಿ ಸಾಗುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ಹಾಗೂ ವಾರಾಂತ್ಯದ ದಟ್ಟ ವಾಹನ ಸಂಚಾರವನ್ನು ಪೊಲೀಸರು ಗುರುತಿಸಿದ್ದಾರೆ.

ವಿವರ: ಅಪಘಾತದಲ್ಲಿ ನೆಲಮಂಗಲ ತಾಲೂಕಿನ ಮಾರುತಿನಗರದ ಕೆಂಪರಾಜು (52), ಅರಣ್ಯ ಇಲಾಖೆಯ ಗಾರ್ಡ್ ಆಗಿದ್ದವರು, ಸ್ಥಳದಲ್ಲೇ ಮೃತಪಟ್ಟರು. ಅವರ ಬೈಕಿನ ಹಿಂಬದಿ ಕುಳಿತಿದ್ದ ರಾಜಣ್ಣ ಗಂಭೀರ ಗಾಯಗೊಂಡು ಖಾಸಗಿ ಆಸ್ಪತ್ರೆಗೆ ಸಾಗಿಸಲ್ಪಟ್ಟರೂ ಚಿಕಿತ್ಸೆ ಫಲಕಾರಿಯಾಗದೆ ಅಲ್ಲಿ ಸಾವನ್ನಪ್ಪಿದರು. ಈ ದುರ್ಘಟನೆ ಕುಟುಂಬ ಹಾಗೂ ಸ್ಥಳೀಯರಲ್ಲಿ ಆಘಾತ ಮೂಡಿಸಿದೆ.

ರಸ್ತೆ ಕಾಮಗಾರಿ – ಎಚ್ಚರಿಕೆ ಫಲಕಗಳ ಕೊರತೆ: ನಡೆಯುತ್ತಿರುವ ಹೆದ್ದಾರಿ ಕಾಮಗಾರಿ ನಿಧಾನ ಗತಿಯಲ್ಲಿ ಸಾಗುತ್ತಿದ್ದು , ಅಗತ್ಯವಿರುವ ಎಚ್ಚರಿಕೆ ಫಲಕಗಳು ಹಾಗೂ ಸರಿಯಾದ ಮಾರ್ಗಸೂಚಿ ಇಲ್ಲದೆ ವಾಹನ ಚಾಲಕರು ಅಪಾಯಕ್ಕೆ ಸಿಲುಕುತ್ತಿದ್ದಾರೆ. ಸ್ಥಳೀಯರು ಹಲವು ಬಾರಿ ಈ ಸಮಸ್ಯೆ ಕುರಿತು ಮನವಿ ಮಾಡಿದರೂ ಸಮರ್ಪಕ ಕ್ರಮ ಕೈಗೊಳ್ಳಲಾಗಿಲ್ಲ ಎಂಬ ಆರೋಪ ಮಾಡಿದ್ದಾರೆ.

ವಾರಾಂತ್ಯದ ದಟ್ಟಣೆ: ಘಟನೆಯ ದಿನ ವಾರಾಂತ್ಯವಾಗಿದ್ದ ಕಾರಣ ಹೆದ್ದಾರಿಯಲ್ಲಿ ವಾಹನ ಸಂಚಾರ ಅತ್ಯಧಿಕವಾಗಿತ್ತು. ಕಾಮಗಾರಿ ಪ್ರದೇಶದಲ್ಲಿ ಲೇನ್‌ಗಳು ಕಡಿಮೆಯಾಗಿರುವುದು, ತಾತ್ಕಾಲಿಕ ಡೈವರ್ಸ್‌ನ್‌ಗಳು ಸ್ಪಷ್ಟವಾಗಿಲ್ಲದಿರುವುದು ದಟ್ಟಣೆಯನ್ನು ಇನ್ನಷ್ಟು ಗೊಂದಲಕಾರಿಯಾಗಿಸಿತು. ಇಂತಹ ಪರಿಸ್ಥಿತಿಯಲ್ಲೇ ಕ್ಯಾಂಟರ್ ಬೈಕ್‌ಗೆ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದೆ.

ಅಪಘಾತಕ್ಕೀಡಾದ ಕ್ಯಾಂಟರ್ ವಾಹನ ಹಾಗೂ ಅದರ ಚಾಲಕನನ್ನು ನೆಲಮಂಗಲ ಸಂಚಾರಿ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪ್ರಕರಣ ದಾಖಲಿಸಿ ಹೆಚ್ಚಿನ ತನಿಖೆ ಕೈಗೊಳ್ಳಲಾಗುತ್ತಿದೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಸರ್ಕಾರಿ ಆಸ್ಪತ್ರೆಗೆ ಸಾಗಿಸಲಾಗಿದೆ. ಸ್ಥಳಕ್ಕೆ ಹೆಚ್ಚಿನ ಪೊಲೀಸರು ಧಾವಿಸಿ ಸಂಚಾರವನ್ನು ನಿಯಂತ್ರಿಸಿದರು.

ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ಸಿ.ಕೆ. ಬಾವ ಅವರು,
"ವಾರಾಂತ್ಯದ ದಟ್ಟಣೆ, ನಿಧಾನಗತಿಯ ರಸ್ತೆ ಕಾಮಗಾರಿ ಹಾಗೂ ಎಚ್ಚರಿಕೆ ಫಲಕಗಳ ಕೊರತೆ ಈ ಅಪಘಾತಕ್ಕೆ ಕಾರಣವಾಗಿದೆ. ಕೆಂಪರಾಜು ಸ್ಥಳದಲ್ಲೇ ಸಾವನ್ನಪ್ಪಿದರು, ಹಿಂಬದಿ ಕುಳಿತಿದ್ದ ರಾಜಣ್ಣ ಆಸ್ಪತ್ರೆಗೆ ಸಾಗಿಸಿದ ಬಳಿಕ ಮೃತಪಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಹೆಚ್ಚುವರಿ ಸಿಬ್ಬಂದಿ ನಿಯೋಜನೆ ಮಾಡಲಾಗುವುದು. ಹೆದ್ದಾರಿ ಕಾಮಗಾರಿ ನಡೆಸುತ್ತಿರುವವರಿಗೆ ಅಗತ್ಯವಿರುವ ಕಡೆ ಎಚ್ಚರಿಕೆ ಫಲಕಗಳನ್ನು ತಕ್ಷಣ ಅಳವಡಿಸುವಂತೆ ಸೂಚಿಸಲಾಗಿದೆ" ಎಂದು ಹೇಳಿದರು.

ಕೆಂಪರಾಜು ಅರಣ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಶ್ರದ್ಧಾವಂತ ಸಿಬ್ಬಂದಿ. ಕುಟುಂಬದ ಏಕೈಕ ಆಧಾರರಾಗಿದ್ದ ಅವರ ಅಕಾಲಿಕ ಸಾವು ಮನೆಮಂದಿಗೆ ಭಾರೀ ದುಃಖ ತಂದಿದೆ. ಗ್ರಾಮದವರು ಮೃತರ ಮನೆಗೆ ತೆರಳಿ ಕುಟುಂಬಕ್ಕೆ ಸಾಂತ್ವನ ಸೂಚಿಸಿದರು. ಇದೇ ವೇಳೆ ಸಾರ್ವಜನಿಕರು, "ಹೆದ್ದಾರಿ ಕಾಮಗಾರಿ ದೀರ್ಘಕಾಲದಿಂದ ಮುಂದೂಡಲ್ಪಡುತ್ತಿದ್ದು , ಅಸಮರ್ಪಕ ವ್ಯವಸ್ಥೆಯಿಂದ ನಿರಂತರ ಅಪಘಾತಗಳು ಸಂಭವಿಸುತ್ತಿವೆ. ತಕ್ಷಣ ಸರಿಪಡಿಸದಿದ್ದರೆ ರಸ್ತೆ ತಡೆ ಪ್ರತಿಭಟನೆ ನಡೆಸುತ್ತೇವೆ" ಎಂದು ಎಚ್ಚರಿಸಿದರು.

## ಆನಂದ್ ಸಿ ತಿರುಮಲ ಯುವಜನ ಸಭಾ ರಾಜ್ಯಾಧ್ಯಕ್ಷರನ್ನಾಗಿ ನೇಮಕ



ಬೆಂಗಳೂರು: ಯು ವ ಸಮುದಾಯದಲ್ಲಿ ಸಾಮಾಜಿಕ ಸಮಾನತೆಯ ಬಾಂಧವ್ಯವನ್ನು ವೃದ್ಧಿಸುವುದು ಸಮಾಜವಾದಿಗಳು ಕರ್ತವ್ಯವಾಗಿ ಮುನ್ನಡೆಸಿಕೊಂಡು ಬರಬೇಕೆಂದು ಉತ್ತರ ಪ್ರದೇಶದ ಸಮಾಜವಾದಿ ಪಕ್ಷದ ರಾಜ್ಯ ಅಧ್ಯಕ್ಷರು ಶಾಮ್ ಲಾಲ್ ಪಾಲ್ ಹೇಳಿದರು.

ಲಾಕ್ನೋನದ ಸಮಾಜವಾದಿ ಪಕ್ಷದ ಕಚೇರಿಯಲ್ಲಿ ಕರ್ನಾಟಕ ಸಮಾಜವಾದಿ ಯುವಜನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಆನಂದ್ ಸಿ ತಿರುಮಲ ಅವರಿಗೆ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು, ಇವತ್ತಿನ ದೇಶದ ರಾಜಕೀಯ ಸ್ಥಿತಿಗತಿಗಳಿಗೆ ಸಮಾಜವಾದಿ ಸಿದ್ಧಾಂತ ಬಹಳ ಅಗತ್ಯವಿದೆ. ಆ ನಿಟ್ಟಿನಲ್ಲಿ ಯುವಜನತೆಯನ್ನು ಸಮಾಜವಾದಿಯತ್ತ ಆಕರ್ಷಿಸುವ ನಿಟ್ಟಿನಲ್ಲಿ ಕರ್ನಾಟಕದಲ್ಲಿ ಹೆಚ್ಚಿನ ಕಾರ್ಯಕ್ರಮಗಳು ಜರುಗಲಿ ಎಂದು ತಿಳಿಸಿದರು.

ಈಗಾಗಲೇ ಕರ್ನಾಟಕ ಸಮಾಜವಾದಿ ಯುವಜನ ರಾಜ್ಯಾಧ್ಯಕ್ಷರಾದ ಆನಂದ್ ಸಿ ತಿರುಮಲ ಅವರು ಹತ್ತಾರು ಕಾರ್ಯಕ್ರಮಗಳನ್ನು ಆಯೋಜಿಸಿದ್ದಾರೆ. ಪಕ್ಷದ ಕಾರ್ಯಕ್ರಮಗಳು ಸಕ್ರಿಯವಾಗಿ ಮುಂದುವರೆದು ಕರ್ನಾಟಕದಲ್ಲಿ ಸಮಾಜವಾದಿ ಪಕ್ಷದ ಯುವಜನರ ಬೇರುಗಳನ್ನು ಗಟ್ಟಿಗೊಳಿಸಲಿ. ಅವರ ಈ ಕಾರ್ಯಕ್ಕೆ ದೇಶದ ಎಲ್ಲ ಸಮಾಜವಾದಿ ನಾಯಕರ ಬೆಂಬಲವಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಸಮಾಜವಾದಿ ಪಕ್ಷದ ಕರ್ನಾಟಕ ರಾಜ್ಯಾಧ್ಯಕ್ಷ ಎನ್.ಮಂಜಪ್ಪ ಮಾತನಾಡಿ, ಕರ್ನಾಟಕದಲ್ಲಿ ಯುವ ಜನತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು , ಆನಂದ್ ಸಿ ತಿರುಮಲ ಅವರನ್ನು ಪಕ್ಷದ ಯುವಜನ ರಾಜ್ಯಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದೇವೆ. ಇದರಿಂದ ರಾಜ್ಯದಲ್ಲಿ ಸಮಾಜವಾದಿ ಪಕ್ಷ ಸಂಘಟಿಸಲು ಹೆಚ್ಚಿನ ಶಕ್ತಿ ಬಂದಿದ್ದೆ ಎಂದು ಹೇಳಿದರು.

ಸಮಾಜವಾದಿ ಯುವಜನ ಸಭಾ ರಾಜ್ಯ ಅಧ್ಯಕ್ಷ ಆನಂದ್ ಸಿ ತಿರುಮಲ ಮಾತನಾಡಿ, ದೇಶದ ಆಗುಹೋಗುಗಳು ರಾಜಕೀಯ ವ್ಯವಸ್ಥೆ ಮೇಲೆ ನಿಂತಿದೆ. ಹೀಗಾಗಿ ದೇಶದ ಎಲ್ಲ ಸಾಮಾಜಿಕ ಕ್ಷೇತ್ರದಲ್ಲಿ ಸರ್ವಜನರನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವುದೇ ಸಮಾಜವಾದಿ ಸಿದ್ಧಾಂತದ ಮೂಲ ಆಶಯವಾಗಿದೆ. ಆ ನಿಟ್ಟಿನಲ್ಲಿ ಹಿರಿಯ ಸಮಾಜವಾದಿ ಧುರೀಣರ ಸಲಹೆ ಸಹಕಾರದೊಂದಿಗೆ ಕರ್ನಾಟಕದಲ್ಲಿ ಸಮಾಜವಾದಿ ಪಕ್ಷವನ್ನು ಪ್ರಬಲವಾಗಿ ಕಟ್ಟುವ ಆಶಯವನ್ನು ಹೊಂದಿದ್ದೇನೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮುಖ್ಯ ಕಾರ್ಯದರ್ಶಿ ವೆಂಕಟ ಮುನಿ, ಕರ್ನಾಟಕ ರಾಜ್ಯ ಯುವ ಜನ ಸಭಾ ಅಧ್ಯಕ್ಷ ರಾಜ್ಯ ಪ್ರಶಸ್ತಿ ವಿಜೇತರು ಆನಂದ್ ಸಿ ತಿರುಮಲ, ಕರ್ನಾಟಕ ರಾಜ್ಯ ಕಾರ್ಯದರ್ಶಿ ರಾಕೇಶ್ ಯಾದವ್, ಗುಲ್ಬರ್ಗಾ ಜಿಲ್ಲಾ ಅಧ್ಯಕ್ಷ ರವೀಂದ್ರ, ಬೆಂಗಳೂರು ನಗರ ಯುವ ಜನ ಸಭಾ ಅಧ್ಯಕ್ಷ ಸಂಜಯ್, ಮೊಳಕಾಲ್ಮುರು ತಾಲೂಕು ಅಧ್ಯಕ್ಷ ಜಯಣ್ಣ ಮತ್ತಿತರರು ಭಾಗವಹಿಸಿದರು.

## ಚೌಡೇನಹಳ್ಳಿ ಗ್ರಾ.ಪಂ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ವಿಶೇಷ ಗ್ರಾಮ ಸಭೆ



ಕೃಷ್ಣರಾಜಪೇಟೆ: ಚೌಡೇನಹಳ್ಳಿ (ಕಿಕ್ಕೇರಿ) ಗ್ರಾಮ ಪಂಚಾಯತಿಯ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಮತ್ತು ಕೇಂದ್ರ ಹಾಗೂ ಹಣಕಾಸು ಯೋಜನೆಯ 2025-26ನೇ ಸಾಲಿನ ಸಾಮಾಜಿಕ ಪರಿಶೋಧನೆಯ ವಿಶೇಷ ಗ್ರಾಮಸಭೆ ಇಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವೀಚಾರಕಿ ಶಾಂತವ್ವ ಎಸ್ ಹಾವಣ್ಣವರ್ ರವರ ಸಭಾಧ್ಯಕ್ಷತೆಯಲ್ಲಿ ಗ್ರಾಪಂ ಕಛೇರಿ ಸಭಾಂಗಣದಲ್ಲಿ ನಡೆಯಿತು.ತಾಲ್ಲೋಕು ಲೆಕ್ಕಪರಿಶೋದನಾ ಸಂಪನ್ಮೂಲ ವ್ಯಕ್ತಿ ಸೋಮಶೇಖರ್ ರವರು ರಾಜ್ಯ ಮತ್ತು ಕೇಂದ್ರ ಹಣಕಾಸು ಯೋಜನೆ ಹಾಗೂ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಯೋಜನೆಯ ಬಗ್ಗೆ ಮಾಹಿತಿ ನೀಡಿದರು.

ಪ್ರತಿಯೊಬ್ಬರು ಉದ್ಯೋಗ ಖಾತರಿ ಯೋಜನೆಯ ಪ್ರಯೋಜನವನ್ನು ಪಡೆದುಕೊಳ್ಳುವಂತೆ ತಿಳಿಸಿದ ಅವರು ಚೌಡೇನಹಳ್ಳಿ ಗ್ರಾಪಂನಿಂದ ಉದ್ಯೋಗ ಖಾತರಿಯಲ್ಲಿ ಉತ್ತಮ ರೀತಿಯಲ್ಲಿ ಕೆಲಸಗಳು ಆಗಿದೆ ಎಂದು ಶ್ಲಾಘನೆ ವ್ಯಕ್ತಪಡಿಸಿದ ಅವರು ಉದ್ಯೋಗ ಖಾತರಿಗೆ ಸರ್ಕಾರ ಕೆಲವೊಂದು ನೀತಿ ನಿಯಮಗಳನ್ನು ಅಳವಡಿಸಿದ್ದು ಅದರಂತೆ ನಾವು ಮುಂದುವರಿಯಬೇಕಾಗಿದೆ ಪ್ರತಿಯೊಬ್ಬರು ಉದ್ಯೋಗ ಚೀಟಿ ಮಾಡಿಕೊಳ್ಳುವ ಮೂಲಕ ಉದ್ಯೋಗ ಖಾತರಿಯ ಪ್ರಯೋಜನ ಪಡೆದುಕೊಳ್ಳುವಂತೆ ತಿಳಿಸಿದರು.

ತಾಲೂಕು ತೋಟಗಾರಿಕೆ ಇಲಾಖೆಯ ಅಧಿಕಾರಿಗಳಾದ ರವಿಗೌಡ ಮಾತನಾಡಿ,ಸರ್ಕಾರದ ಅನುದಾನವನ್ನು ಸಮರ್ಪಕ ರೀತಿಯಲ್ಲಿ ಬಳಕೆ ಮಾಡಬೇಕು ಮತ್ತು ಪಾರದರ್ಶಕವಾಗಿ ಇರಬೇಕು ಆನುವ ದೃಷ್ಟಿಯಲ್ಲಿ ಸಾಮಾಜಿಕ ಲೆಕ್ಕ ಪರಿಶೋಧನಾ ಸಭೆಯನ್ನು ಕರೆಯಲಾಗುತ್ತದೆ.ನಾವು ಸರಕಾರದ ಕಾನೂನು ನೀತಿ ನಿಯಮಗಳಂತೆ ಕಾಮಗಾರಿಗಳನ್ನು ನಡೆಸಬೇಕಾಗುತ್ತದೆ ಸರಕಾರ ಕೇಳುವ ದಾಖಲೆಗಳನ್ನು ಒದಗಿಸುವುದು ನಮ್ಮ ಕರ್ತವ್ಯ ವಾಗಿದ್ದು ಕರ್ತವ್ಯವಾಗಿದೆ ಮತ್ತು ಒಂದೇ ಪ್ರದೇಶದಲ್ಲಿ ಮತ್ತೆ ಮತ್ತೆ ಕಾಮಗಾರಿ ನಡೆಸುವುದು ಇದಕ್ಕೆ ಗ್ರಾಮಸ್ಥರು ಆಸ್ಪದ ಕೊಡಬಾರದು,

ಸರಕಾರದ ಯಾವುದೇ ಸೌಲಭ್ಯಗಳನ್ನು ಪಡೆದುಕೊಳ್ಳಬೇಕಾದರೂ ಸರಕಾರ ಕೇಳುವ ಸೂಕ್ತ ದಾಖಲೆಗಳನ್ನು ಒದಗಿಸುವ ಮತ್ತು ಸೂಕ್ತ ಪ್ರದೇಶದಲ್ಲಿ ಕಾಮಗಾರಿ ನಡೆಸುವ ಕರ್ತವ್ಯ ನಮ್ಮದಾಗಿದೆ ಎಂದ ಅವರು ಸುಮಾರು 14 ಬೆಳೆಗಳಿಗೆ ಸರ್ಕಾರ ಪ್ರೋತ್ಸಾಹ ಧನ ನೀಡುತ್ತಿದೆ ಹಾಗೂ ಇನ್ನಿತರ ಉಪಬೆಳೆಗಳನ್ನು ಬೆಳೆಸಿಕೊಂಡು ಜೀವನ ವೃದ್ಧಿಗೊಳಿಸುವಂತೆ ಹೇಳಿ ಇಲಾಖೆಯಿಂದ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

ಸಭಾಧ್ಯಕ್ಷತೆ ವಹಿಸಿದ್ದ ಶಾಂತವ್ವ ಎಸ್ ಹಾವಣ್ಣನವರ್ ಮಾತನಾಡಿ ಇತ್ತೀಚೆಗೆ ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗಿದ್ದು ತಾಲ್ಲೋಕಿನಲ್ಲಿ ನೂರಕ್ಕೂ ಹೆಚ್ಚು ಪ್ರಕರಣಗಳು ಕಂಡು ಬಂದಿದ್ದು ಅಂತವರ ವಿರುದ್ದ ಕಠಿಣ ಕ್ರಮ ಕೈಗೊಳ್ಳಲಾಗಿದೆ ಆದರಿಂದಾಗುವ ದುಷ್ಪರಿಣಾಮದ ಬಗ್ಗೆ ಗಂಭೀರವಾಗಿ ಅರಿವು ಮೂಡಿಸಿದರು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಗ್ರಾ,ಪಂ ಅಧ್ಯಕ್ಷೆ ಶ್ರೀಮತಿ ಧನಲಕ್ಷ್ಮಿಶಂಭು, ಸದಸ್ಯರಾದ ಸೋಮಶೇಖರ್, ಶ್ರೀಶೈಲ, ರಮೇಶ್, ದೇವರಾಜು, ಪಿಡಿಒ ನಟರಾಜಮೂರ್ತಿ, ವಿಷಕಂಠರಾಧ್ಯ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಗ್ರಾಮಸ್ಥರು ಉಪಸ್ಥಿತರಿದ್ದರು,

## 'ಸು ಫ್ರಮ್ ಸೋ' ಶೀಘ್ರದಲ್ಲೇ OTT ಯಲ್ಲಿ

ಕನ್ನಡ ಚಿತ್ರರಂಗದ ಇತ್ತೀಚಿನ ಹಿಟ್ ಚಿತ್ರ 'ಸು ಫ್ರಮ್ ಸೋ', ಬಾಕ್ಸ್ ಆಫೀಸ್‌ನಲ್ಲಿ ಭರ್ಜರಿ ಕಲೆಕ್ಷನ್ ಕಂಡ ಬಳಿಕ ಇದೀಗ ಡಿಜಿಟಲ್ ಪ್ಲಾಟ್‌ಫಾರ್ಮ್‌ಗಳಿಗೆ ಕಾಲಿಡಲು ಸಜ್ಜಾಗಿದೆ. ಜುಲೈ 25 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾದ 'ಸು ಫ್ರಮ್ ಸೋ' ಚಿತ್ರವು ಗಲ್ಲಾಪೆಟ್ಟಿಗೆಯಲ್ಲಿ ಯಶಸ್ಸು ಕಂಡಿತು. ಕಡಿಮೆ ಬಜೆಟ್‌ನಲ್ಲಿ ನಿರ್ಮಾಣಗೊಂಡಿದ್ದ ಈ ಚಿತ್ರ ಇದೀಗ ಒಟಿಟಿಯಲ್ಲಿ ಬಿಡುಗಡೆಯಾಗುತ್ತಿದೆ.

123Telugu ವರದಿ ಪ್ರಕಾರ, ಈ ಚಿತ್ರದ ಡಿಜಿಟಲ್ ಹಕ್ಕುಗಳನ್ನು ಜಿಯೋ ಹಾಟ್‌ಸ್ಟಾರ್ ಅಧಿಕೃತವಾಗಿ ಪಡೆದುಕೊಂಡಿದೆ. ಕಲರ್ಸ್ ಕನ್ನಡ ಈ ಚಿತ್ರದ ಸ್ಯಾಟಲೈಟ್ ಹಕ್ಕುಗಳನ್ನು ಪಡೆದುಕೊಂಡಿದೆ. ಎಲ್ಲ ಭಾಷೆಗಳ OTT ಮತ್ತು ಸ್ಯಾಟಲೈಟ್ ಹಕ್ಕುಗಳು ಸುಮಾರು 5.5 ಕೋಟಿ ರೂ. ಜೊತೆಗೆ GST ಗೆ ಮಾರಾಟವಾಗಿವೆ ಎನ್ನಲಾಗಿದೆ. ತೆಲುಗು ಆವೃತ್ತಿಯು ಸ್ಟಾರ್ ಮಾದಲ್ಲಿ ಪ್ರಸಾರವಾಗಲಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

## ಧರ್ಮಸ್ಥಳ ಪ್ರಕರಣದ: ಸರ್ಕಾರದ ತಪ್ಪನ್ನು ಬಿಚ್ಚಿಟ್ಟ ರಾಜಣ್ಣ

ಬೆಂಗಳೂರು: ಧರ್ಮಸ್ಥಳ ಪ್ರಕರಣ ಕುರಿತು ದೇಶ ಹಾಗೂ ನಾಡಿನಾದ್ಯಂತ ತೀವ್ರ ಚರ್ಚೆಯಾಗುತ್ತಿರುವಂತೆಯೇ ಕಾಂಗ್ರೆಸ್ ನಾಯಕ ಹಾಗೂ ಮಾಜಿ ಸಹಕಾರ ಸಚಿವ ಕೆ. ಎನ್, ರಾಜಣ್ಣ ಭಾನುವಾರ ತಮ್ಮದೇ ಸರ್ಕಾರದ ನಿರ್ಧಾರವನ್ನು ಟೀಕಿಸಿದ್ದಾರೆ.



ದೇವಸ್ಥಾನ ವ್ಯಾಪ್ತಿಯಲ್ಲಿ ಶವ ಹೂತಿದ್ದೇನೆ ಎಂದು ದೂರು ನೀಡಲು ಬಂದ ವ್ಯಕ್ತಿಯು ತಂದಿದ್ದ ಬುರುಡೆಯ ಪೂರ್ವಾಪರಗಳನ್ನು ವಿಚಾರಿಸದೆ ತನಿಖೆಗೆ ಆದೇಶಿಸಿದ್ದು ಸರಿಯಾದ ಕ್ರಮವಲ್ಲ ಎಂದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೂಮಿಯಲ್ಲಿ ಹೂತ ನಂತರ ಮೃತದೇಹವನ್ನು ಹೊರತೆಗೆಯಲು ಕಾನೂನಿನಲ್ಲಿ ನಿರ್ದಿಷ್ಟ ನಿಯಮಗಳಿವೆ. ತಾಲ್ಲೂಕು ಮ್ಯಾಜಿಸ್ಟ್ರೇಟ್ ಅವರ ಅನುಮತಿ ಮತ್ತು ಉಪಸ್ಥಿತಿಯಲ್ಲಿ ಮಾತ್ರ ದೇಹವನ್ನು ಹೊರತೆಗೆಯಬೇಕು, ಇದನ್ನು 'ಎಕ್ಸ್ಯೂಮ್' ಎನ್ನಲಾಗುತ್ತದೆ ಎಂದು ತಿಳಿಸಿದರು.

ಆದರೆ, ಈ ಪ್ರಕರಣದಲ್ಲಿ ತಲೆಬುರುಡೆಯನ್ನು ಕಾನೂನುಬಾಹಿರವಾಗಿ ತರಲಾಗಿದ್ದು , ಇದನ್ನು ಎಲ್ಲಿಂದ, ಹೇಗೆ ಮತ್ತು ಯಾರ ಆದೇಶದ ಮೇರೆಗೆ ತೆಗೆಯಲಾಗಿದೆ ಎಂಬುದನ್ನು ಮೊದಲು ತನಿಖೆ ಮಾಡಬೇಕು ಎಂದು ರಾಜಣ್ಣ ಒತ್ತಾಯಿಸಿದ್ದಾರೆ. ಇದು ಕೇವಲ ಧರ್ಮಸ್ಥಳದ ಹೆಸರಿಗೆ ಮಸಿ ಬಳಿಯುವ ವ್ಯವಸ್ಥಿತ ಸಂಚು ಎಂದು ಅವರು ಆರೋಪಿಸಿದ್ದಾರೆ.

ಈ ವಿಡಿಯೋವನ್ನು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಹಂಚಿಕೊಂಡಿರುವ ಬಿಜೆಪಿ, ಬಿಜೆಪಿ ಕೂಡಾ ಇದನ್ನೇ ಆರಂಭದಿಂದಲೂ ಪ್ರಶ್ನಿಸಿತ್ತು. ಹೂತು ಹಾಕಿದ್ದ ಶವದ ಬುರುಡೆ ಈ ಷಡ್ಯಂತ್ರಕಾರರಿಗೆ ಸಿಕ್ಕಿದ್ದೆಲ್ಲಿ ಎನ್ನುವುದನ್ನು ಪತ್ತೆಹಚ್ಚಲು ಸರ್ಕಾರ ನಿರ್ದೇಶನ ನೀಡಬೇಕಿತ್ತು, ಆದರೆ ಸರ್ಕಾರ ನಗರ ನಕ್ಸಲರ ತಾಳಕ್ಕೆ ತಕ್ಕಂತೆ ಕುಣಿದಿದ್ದು ದುರಂತವೇ ಸರಿ ಎಂದು ಟೀಕಿಸಿದೆ.

## ಹಿಂದೂ ಧಾರ್ಮಿಕ ನಂಬಿಕೆಯ ಮೇಲೆ ನಡೆದ ಪ್ರಾಯೋಜಿತ ದಾಳಿ!

ಧರ್ಮಸ್ಥಳ ಪ್ರಕರಣ ಹಿಂದೂ ಧಾರ್ಮಿಕ ನಂಬಿಕೆಯ ಮೇಲೆ ನಡೆದ ಪ್ರಾಯೋಜಿತ ದಾಳಿ ಎಂಬುದು ಈಗ ಬಹಿರಂಗಗೊಂಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭಾನುವಾರ ಹೇಳಿದ್ದಾರೆ.



ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಸಚಿವರು, ಕಾಂಗ್ರೆಸ್ ಸರ್ಕಾರ ಹಿಂದೂ ಧಾರ್ಮಿಕತೆಯ ಮೇಲೆ ದಾಳಿ ನಡೆಸಿ, ಪುರಾತನವಾದ, ಪ್ರಸಿದ್ಧ ಹಿಂದೂ ದೇವಾಲಯದ ವಿರುದ್ಧ ಇಲ್ಲ-ಸಲ್ಲದ ಷಡ್ಯಂತ್ರದ ಟೂಲ್‌ಕಿಟ್ ಬಳಸಿಕೊಂಡಿತು ಎಂದು ಆರೋಪಿಸಿದ್ದಾರೆ.

ಆತುರದಲ್ಲಿ ಕಾಂಗ್ರೆಸ್ ಸರ್ಕಾರ ಯಾವುದೇ ಹಿನ್ನೆಲೆ ಪರಿಶೀಲನೆ ಮಾಡದೇ, ಏಕಾಏಕಿ ದೊಂಬರಾಟಕ್ಕೆ ದಾರಿ ಮಾಡಿಕೊಟ್ಟಿದ್ದು ಐತಿಹಾಸಿಕ ದುರಂತ ಎಂದಿದ್ದಾರೆ.

ಮುಖವಾಡ ಧರಿಸಿದ ವ್ಯಕ್ತಿಯಿಂದ ಹಿಡಿದು ಪ್ರಾಯೋಜಿತ ಯೂಟ್ಯೂಬರ್‌ಗಳವರೆಗೆ, ಯಾವುದೇ ಸತ್ಯಾಸತ್ಯತೆಗಳನ್ನು ಪರಿಶೀಲಿಸದೇ, ಧರ್ಮಸ್ಥಳದ ಪವಿತ್ರ್ಯವನ್ನು ಹಾಳುಗೆಡವಿ, 15 ದಿನಗಳ ಕಾಲ ಮಾಧ್ಯಮಗಳಿಗೆ ಸರ್ಕಸ್ ಆಗಿ ಬಿಂಬಿಸಲಾಗಿದೆ. ಧಾರ್ಮಿಕ ನಂಬಿಕೆ ಎಂದೆಂದಿಗೂ ವೈಯಕ್ತಿಕ, ಆದರೆ, ಆಡಳಿತದಲ್ಲಿ ಸಮತೋಲನ ಪ್ರಾಮುಖ್ಯ ವಹಿಸುತ್ತದೆ. ಅಸ್ಪಷ್ಟತೆಯ ಕಾಂಗ್ರೆಸ್ ಸರ್ಕಾರದಿಂದಲೇ ಇಷ್ಟು ರಾದ್ಧಾಂತ ಸೃಷ್ಟಿಯಾಗಿದೆ ಎಂದು ಆರೋಪಿಸಿದ್ದಾರೆ.

ಹೆಸರು ಹಾಳು ಮಾಡಿದ ಬಳಿಕ, ಆರೋಪಿಗಳನ್ನು ಬಂಧಿಸುವ ನಾಟಕ. ಇದು ಕ್ಷಮಿಸಲಾರದಂತಹ ದೊಡ್ಡ ತಪ್ಪಾಗಿದೆ. ಅಸಂಖ್ಯಾತ ಭಕ್ತರ ಧಾರ್ಮಿಕತೆಗೆ ನೋವುಂಟಾಗಿದೆ ಎಂದು ಹೇಳಿದ್ದು, ರಾಜ್ಯ ಸರ್ಕಾರದಿಂದ ಕೆಲವೊಂದು ಪ್ರಶ್ನೆಗಳಿಗೆ ಉತ್ತರ ಬಯಸಿದ್ದಾರೆ.
ಕಾಣದ ಕೈಗಳಿಂದ ಉದ್ದೇಶಪೂರ್ವಕ ಪ್ರಯತ್ನ ನಡೆದಿದೆಯಾ? ಇದು ಯಾರ ಆಜ್ಞೆಯ ಮೇರೆಗೆ ಇಂತಹ ದುಸಾಹಸಕ್ಕೆ ಕೈಹಾಕಲಾಯಿತು? ಸತ್ಯಾಸತ್ಯಗಳು ಇದ್ದರೂ, ಕಾಂಗ್ರೆಸ್ ಸರ್ಕಾರ ಏಕೆ ಮೌನವಹಿಸಿದೆ? ಇದರ ಹಿಂದಿನ ಷಡ್ಯಂತ್ರದ ರೂವಾರಿ ಹಾಗೂ ಹಣಕಾಸಿನ ವ್ಯವಹಾರದ ಮೂಲಕ್ಕೆ ತಕ್ಕ ಶಾಸ್ತಿ ಯಾವಾಗ? ನಿಷ್ಪಕ್ಷಪಾತವಾದ ತನಿಖೆ ನಡೆಸಬೇಕು ಮತ್ತು ಹೊಣೆಗಾರಿಕೆಯನ್ನು ಹೊರಬೇಕು ಎಂದು ಆಗ್ರಹಿಸಿದ್ದಾರೆ.

## ಧರ್ಮಸ್ಥಳ ವಿವಾದದಲ್ಲಿ ಬಿಜೆಪಿ ರಾಜಕೀಯ – ಸಚಿವ ಚಲುವರಾಯಸ್ವಾಮಿ ಕಿಡಿ



ಮದ್ದೂರು: ಮಂಡ್ಯದ ಮದ್ದೂರು ತಾಲ್ಲೂಕಿನ ಕೌಡ್ಲೆ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ಧರ್ಮಸ್ಥಳದ ಬಗ್ಗೆ ಕೆಲವರಿಂದ ನಡೆದಿದ್ದ ಅಪಪ್ರಚಾರ ಕುರಿತು ಸರ್ಕಾರ ಕೈಗೊಂಡ ಕ್ರಮವನ್ನು ವಿವರಿಸಿದರು.


"ಸೌಜನ್ಯದ ಹೆಸರಿನಲ್ಲಿ ಧರ್ಮಸ್ಥಳದ ಹೆಸರು ಕೆಡಿಸಲು ಕೆಲ ಕಿಡಿಗೇಡಿಗಳು ಪ್ರಯತ್ನಿಸಿದರು. ಇದರಿಂದ ಬೇಸರಗೊಂಡ ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರು ಸ್ಪಷ್ಟನೆ ನೀಡಿದ್ದರು. ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ ನಮ್ಮ ಸರ್ಕಾರ ತಕ್ಷಣ ಎಸ್‌ಐಟಿ ರಚಿಸಿ ತನಿಖೆ ನಡೆಸಿತು. ಇಂದು ಆ ಎಸ್‌ಐಟಿ ತನಿಖೆಯಿಂದ ಧರ್ಮಸ್ಥಳದ ಮೇಲಿದ್ದ ಕಳಂಕ ಸಂಪೂರ್ಣವಾಗಿ ನಿವಾರಣೆಯಾಗಿದೆ. ಇನ್ನು ಮುಂದೆ ಯಾರೂ ಇಂತಹ ಅಪಪ್ರಚಾರ ಮಾಡುವುದಿಲ್ಲ."

"ಧರ್ಮಸ್ಥಳದ ಬಗ್ಗೆ ಕಳಂಕ ತೆಗೆದು ಹಾಕಿದ ಸರ್ಕಾರವನ್ನು ಅಭಿನಂದಿಸಬೇಕಾದ ಬದಲು, ಬಿಜೆಪಿ ಇದನ್ನು ರಾಜಕೀಯಕ್ಕೆ ಬಳಸಿಕೊಳ್ಳುತ್ತಿದೆ. ತನಿಖೆ ನಡೆಸಿದುದು ನಮ್ಮ ಸರ್ಕಾರ. ತಮ್ಮ ಕಾಲದಲ್ಲಿ ಯಾಕೆ ತನಿಖೆ ನಡೆಸಲಿಲ್ಲ? ಆ ಸಮಯದಲ್ಲಿ ಅಶೋಕ್ ಗೃಹ ಸಚಿವರು, ಉಪಮುಖ್ಯಮಂತ್ರಿಯೂ ಆಗಿದ್ದರು. ಆಗಲೇ ಕ್ರಮ ಕೈಗೊಳ್ಳಬೇಕಿತ್ತು. ಇಂದು ತಮ್ಮ ತಪ್ಪುಗಳನ್ನು ಮುಚ್ಚಿಕೊಳ್ಳಲು ಯಾರೋ ಹೆಸರಿನಲ್ಲಿ ರಾಜಕೀಯ ಮಾಡುತ್ತಿದ್ದಾರೆ" ಎಂದು ಹೇಳಿದರು.

"ಧರ್ಮ ಯಾರದ್ದೂ ಅಲ್ಲ, ಧರ್ಮ ರಾಜಕಾರಣಕ್ಕೂ ಅಲ್ಲ. ನಾವು ಧರ್ಮವನ್ನು ಧರ್ಮವಾಗಿಯೇ ಕಾಣುತ್ತೇವೆ. ಧರ್ಮಸ್ಥಳದ ಗೌರವವನ್ನು ಕಾಪಾಡಲು ಸರ್ಕಾರ ಬದ್ಧವಾಗಿದೆ, ಆದರೆ ಬಿಜೆಪಿ ಮಾತ್ರ ಅದನ್ನು ರಾಜಕೀಯ ಮಾಡಲು ಯತ್ನಿಸುತ್ತಿದೆ" ಎಂದು ಚಲುವರಾಯಸ್ವಾಮಿ ಕಿಡಿ ಕಾರಿದರು.

## ರಾಜಕೀಯ ಲಾಭಕ್ಕಾಗಿ ಸದನಕ್ಕೆ ಅಡ್ಡಿಪಡಿಸುವುದು ಒಳ್ಳೆಯದಲ್ಲ: ಶಾ

ನವದೆಹಲಿ: ಸಂಸತ್ತು ಅಥವಾ ವಿಧಾನಸಭೆಗಳು ಚರ್ಚೆ ನಡೆಸಲು ಮತ್ತು ನೀತಿಯನ್ನು ರೂಪಿಸಲು ಇರುವ ಸ್ಥಳಗಳಾಗಿವೆ. ಆದರೆ, ಸಂಕುಚಿತ ರಾಜಕೀಯ ಲಾಭಕ್ಕಾಗಿ ವಿರೋಧದ ಹೆಸರಿನಲ್ಲಿ ಸದನ ಕಾರ್ಯನಿರ್ವಹಿಸಲು ಬಿಡದಿದ್ದರೆ ಅದು ಒಳ್ಳೆಯದಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾನುವಾರ ಹೇಳಿದ್ದಾರೆ.



ಪ್ರತಿಪಕ್ಷಗಳ ಪ್ರತಿಭಟನೆಯ ನಂತರ ಪದೇ ಪದೆ ಅಡ್ಡಿಪಡಿಸುವಿಕೆ ಮತ್ತು ಕಲಾಪ ಮುಂದೂಡಿಕೆಗಳಿಂದಾಗಿ ಸಂಸತ್ತಿನ ಮಳೆಗಾಲದ ಅಧಿವೇಶನವು ಅಂತ್ಯಗೊಂಡ ಮೂರು ದಿನಗಳ ನಂತರ, ಅಖಿಲ ಭಾರತ ಸ್ಪೀಕರ್‌ಗಳ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡುತ್ತಾ ಶಾ ಈ ಹೇಳಿಕೆ ನೀಡಿದರು.

'ಸಂಸತ್ತಿನಲ್ಲಿ ಸೀಮಿತ ಚರ್ಚೆ ಅಥವಾ ಚರ್ಚೆಗಳು ನಡೆದಾಗ, ರಾಷ್ಟ್ರ ನಿರ್ಮಾಣದಲ್ಲಿ ಸದನದ ಕೊಡುಗೆಯ ಮೇಲೆ ಪರಿಣಾಮ ಬೀರುತ್ತದೆ. ಪ್ರಜಾಪ್ರಭುತ್ವದಲ್ಲಿ ಚರ್ಚೆ ನಡೆಯಬೇಕು. ಆದರೆ, ಯಾರೊಬ್ಬರ ಸಂಕುಚಿತ ರಾಜಕೀಯ ಲಾಭಕ್ಕಾಗಿ ವಿರೋಧದ ಹೆಸರಿನಲ್ಲಿ ಸದನವನ್ನು ಕಾರ್ಯನಿರ್ವಹಿಸಲು ಬಿಡದಿದ್ದರೆ ಅದು ಒಳ್ಳೆಯದಲ್ಲ. ವಿರೋಧವನ್ನು ಯಾವಾಗಲೂ ಸಂಯಮದಿಂದ ಇಡಬೇಕು' ಎಂದರು.

'ಆದರೆ ವಿರೋಧದ ಹೆಸರಿನಲ್ಲಿ, ಸುಗಮ ಕಲಾಪ ನಡೆಯಲು ದಿನದಿಂದ ದಿನಕ್ಕೆ ಅವಕಾಶ ನೀಡದಿದ್ದರೆ, ಅದು ಒಳ್ಳೆಯದಲ್ಲ. ದೇಶವು ಅದರ ಬಗ್ಗೆ ಚಿಂತಿಸಬೇಕು, ಜನರು ಅದರ ಬಗ್ಗೆ ಚಿಂತಿಸಬೇಕು ಮತ್ತು ಚುನಾಯಿತ ಪ್ರತಿನಿಧಿಗಳು ಅದರ ಬಗ್ಗೆ ಚಿಂತಿಸಬೇಕು' ಎಂದು ಅವರು ಹೇಳಿದರು.

ಎಲ್ಲಾ ಚರ್ಚೆಗಳು ಸ್ವಲ್ಪ ಅರ್ಥಪೂರ್ಣವಾಗಿರಬೇಕು ಮತ್ತು ಸ್ಪೀಕರ್ ಹುದ್ದೆಯ ಘನತೆ ಮತ್ತು ಗೌರವವನ್ನು ಹೆಚ್ಚಿಸುವತ್ತ ಎಲ್ಲರೂ ಕೆಲಸ ಮಾಡಬೇಕು ಎಂದು ಶಾ ಹೇಳಿದರು. 'ಜನರ ಸಮಸ್ಯೆಗಳ ಕುರಿತು ಧ್ವನಿ ಎತ್ತಲು ನಾವು ನಿಷ್ಪಕ್ಷಪಾತ ವೇದಿಕೆಯನ್ನು ಒದಗಿಸಲು ಕೆಲಸ ಮಾಡಬೇಕು. ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ಸದಸ್ಯರ ವಾದಗಳು ನಿಷ್ಪಕ್ಷಪಾತವಾಗಿರಬೇಕು. ಸದನದ ಕಾರ್ಯನಿರ್ವಹಣೆಯನ್ನು ಆಯಾ ಸದನದ ನಿಯಮಗಳು ಮತ್ತು ನಿರ್ಬಂಧಗಳ ಪ್ರಕಾರ ನಡೆಸಲಾಗಿದೆಯೇ ಎಂಬುದನ್ನು ನಾವು ಖಚಿತಪಡಿಸಿಕೊಳ್ಳಬೇಕು' ಎಂದು ಅವರು ಹೇಳಿದರು.

ಹಸ್ತಿನಾಪುರದಲ್ಲಿ ಮಹಾಭಾರತದ ಪಾತ್ರಧಾರಿ ದ್ರೌಪದಿಗೆ ಆದ ಅವಮಾನವನ್ನು ಉಲ್ಲೇಖಿಸಿದ ಅವರು, ಸದನದ ಘನತೆಗೆ ಧಕ್ಕೆಯಾದಾಗಲೆಲ್ಲಾ ದೇಶವು ಭೀಕರ ಪರಿಣಾಮಗಳನ್ನು ಕಂಡಿದೆ ಎಂದು ಹೇಳಿದರು. ಸ್ವಾತಂತ್ರ್ಯದ ನಂತರದ ಭಾರತದ ಪ್ರಜಾಪ್ರಭುತ್ವ ಸಂಪ್ರದಾಯವನ್ನು ಶ್ಲಾಘಿಸಿದ ಗೃಹ ಸಚಿವರು, ಇಲ್ಲಿನ ಪ್ರಜಾಪ್ರಭುತ್ವವು ತುಂಬಾ ಆಳವಾಗಿ ಬೇರುಗಳನ್ನು ಹೊಂದಿದ್ದು , ಆಡಳಿತ ಬದಲಾವಣೆಯ ಸಮಯದಲ್ಲಿ ಒಂದೇ ಒಂದು ಹನಿ ರಕ್ತವೂ ಚೆಲ್ಲಿಲ್ಲ ಎಂದು ಹೇಳಿದರು.

ಕೇಂದ್ರ ವಿಧಾನಸಭೆಯ ಮೊದಲ ಚುನಾಯಿತ ಭಾರತೀಯ ಸ್ಪೀಕರ್ ವಿಠ್ಠಲಭಾಯಿ ಪಟೇಲ್ ಅವರಿಗೆ ಗೌರವ ಸಲ್ಲಿಸಿದ ಅವರು, .100 ವರ್ಷಗಳ ಹಿಂದೆ ಇದೇ ದಿನದಂದು ಮಹಾನ್ ಸ್ವಾತಂತ್ರ್ಯ ಹೋರಾಟಗಾರನನ್ನು ಕೇಂದ್ರ ವಿಧಾನಸಭೆಯ ಅಧ್ಯಕ್ಷರನ್ನಾಗಿ ನೇಮಿಸಲಾಯಿತು. ಇದು ಭಾರತದ ಶಾಸಕಾಂಗ ಇತಿಹಾಸದ ಆರಂಭವನ್ನು ಸೂಚಿಸುತ್ತದೆ ಎಂದು ಅವರು ಹೇಳಿದರು.

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಸಹೋದರ ವಿಠ್ಠಲಭಾಯಿ ಅವರ ಕೊಡುಗೆ ವರ್ಷಗಳಲ್ಲಿ ಕಣ್ಮರೆಯಾಗಿದೆ. ದೇಶದ ಸ್ವಾತಂತ್ರ್ಯ ಹೋರಾಟ ಮುಖ್ಯವಾಗಿದ್ದರೆ, ದೇಶವನ್ನು ನಡೆಸುವುದು ಮತ್ತು ಶಾಸಕಾಂಗ ಕಾರ್ಯವಿಧಾನಗಳನ್ನು ಸ್ಥಾಪಿಸುವುದು ಅಷ್ಟೇ ಮುಖ್ಯ. ಕಷ್ಟದ ದಿನಗಳಲ್ಲಿಯೂ ಪ್ರಜಾಪ್ರಭುತ್ವವನ್ನು ಸ್ಥಾಪಿಸುವಲ್ಲಿ ಮತ್ತು ಬಲಪಡಿಸುವಲ್ಲಿ ವಿಠ್ಠಲಭಾಯಿ ಪಟೇಲ್ ಪ್ರಮುಖ ಪಾತ್ರ ವಹಿಸಿದ್ದಾರೆ. ನಾವೆಲ್ಲರೂ ಅದನ್ನು ನೆನಪಿನಲ್ಲಿಟ್ಟುಕೊಳ್ಳಬೇಕು ಎಂದು ಅವರು ಹೇಳಿದರು.

## ರಾಜಕೀಯ ನಿವೃತ್ತಿಯ ಸಂಕೇತ ನೀಡಿದ ಕೇಂದ್ರ ಸಚಿವ ವಿ.ಸೋಮಣ್ಣ



ತುಮಕೂರು: ಕೇಂದ್ರ ಸಚಿವ ವಿ. ಸೋಮಣ್ಣ ಅವರು ಭಾನುವಾರ ತುಮಕೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ, ತಮ್ಮ ಭವಿಷ್ಯದ ರಾಜಕೀಯ ಜೀವನದ ಬಗ್ಗೆ ಮಹತ್ವದ ಹೇಳಿಕೆ ನೀಡಿದರು. ರಾಜ್ಯದ ಅಭಿವೃದ್ಧಿ ಹಾಗೂ ತುಮಕೂರು ಜಿಲ್ಲಾಭಿವೃದ್ಧಿ ವಿಚಾರವಾಗಿ ಮಾತನಾಡಿದ ಅವರು, "ತುಮಕೂರು-ಬೆಂಗಳೂರು ನಾಲ್ಕು ಪಥದ ರೈಲ್ವೆಯ ಸರ್ವೇ ಕಾರ್ಯ ಪೂರ್ಣಗೊಂಡಿದ್ದು , ಡಿಪಿಆರ್ ತಯಾರಿಕೆಯ ಹಂತ ಆರಂಭವಾಗಿದೆ. ಜೊತೆಗೆ ಎನ್‌ಎಚ್-4 ರ ತಿಮ್ಮರಾಜನಹಳ್ಳಿ ಯೋಜನೆ ಕುರಿತು ಕೆಐಡಿಬಿ ಅಧಿಕಾರಿಗಳ ಜೊತೆ ಚರ್ಚೆ ನಡೆಸಿದ್ದೇನೆ. ಮುಂದಿನ 50 ವರ್ಷಗಳಿಗೂ ತೊಂದರೆ ಆಗದಂತೆ ಯೋಜನೆ ರೂಪಿಸಲಾಗಿದೆ" ಎಂದು ವಿವರಿಸಿದರು.

ತಮ್ಮ ರಾಜಕೀಯ ಭವಿಷ್ಯದ ಬಗ್ಗೆ ಮಾತಾಡಿದ ಸೋಮಣ್ಣ, "ನಾನು ಇನ್ನೂ 50 ವರ್ಷ ಬದುಕುತ್ತೀನೋ ಗೊತ್ತಿಲ್ಲ, ಆದರೆ ನಾನು ಮತ್ತೆ ಚುನಾವಣೆಗೆ ನಿಲ್ಲುವುದಿಲ್ಲ. ದೇವರೂ ನಿಲ್ಲು ಎಂದರೂ ನಾನು ಕೇಳುವುದಿಲ್ಲ. ನನ್ನ ಮನಸ್ಸು ಹೀಗೆ ತೀರ್ಮಾನಿಸಿದೆ. ನಾನು ಮಾಡಿದ ಕೆಲಸಗಳೇ ನನ್ನ ಹೆಜ್ಜೆ ಗುರುತುಗಳು" ಎಂದು ಹೇಳಿದರು. ಈ ಹೇಳಿಕೆಯಿಂದ ವಿ. ಸೋಮಣ್ಣ ಅವರು ತಮ್ಮ ರಾಜಕೀಯ ನಿವೃತ್ತಿಯ ಸಂಕೇತ ನೀಡಿದ್ದಾರೆ ಎಂದು ರಾಜಕೀಯ ವಲಯದಲ್ಲಿ ಚರ್ಚೆ ಆರಂಭವಾಗಿದೆ.

## RSS ಗೀತೆ ಹಾಡಿ ಹೊಗಳಿದ ಕುಣಿಗಲ್ ಶಾಸಕ!



ತುಮಕೂರು: 'ನಮಸ್ತೆ ಸದಾ ವತ್ಸಲೇ ಮಾತೃಭೂಮಿ' ಎಂಬ ಆರ್ ಎಸ್ ಎಸ್ ಗೀತೆಯ ಮೊದಲ ಕೆಲವು ಸಾಲುಗಳನ್ನು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸದನದಲ್ಲಿ ಹಾಡಿದ ನಂತರ, ಆಡಳಿತಾರೂಢ ಕಾಂಗ್ರೆಸ್ ಶಾಸಕ ಎಚ್‌ಡಿ ರಂಗನಾಥ್ ಕೂಡ ಭಾನುವಾರ ಆರ್‌ಎಸ್‌ಎಸ್ ಗೀತೆಯ ಆರಂಭಿಕ ಸಾಲುಗಳನ್ನು ಹಾಡಿ ಹೊಗಳಿದ್ದಾರೆ.

11 ಜನರ ಪ್ರಾಣವನ್ನು ಬಲಿತೆಗೆದುಕೊಂಡ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದ ಕುರಿತು ರಾಜ್ಯ ವಿಧಾನಸಭೆಯಲ್ಲಿ ನಡೆದ ಚರ್ಚೆಯ ಸಂದರ್ಭದಲ್ಲಿ ಆಗಸ್ಟ್ 21 ರಂದು ಡಿಕೆ ಶಿವಕುಮಾರ್ ಆರ್‌ಎಸ್‌ಎಸ್ ಗೀತೆಯನ್ನು ಹಾಡುವ ಮೂಲಕ ಎಲ್ಲರನ್ನೂ ಅಚ್ಚರಿಗೊಳಿಸಿದ್ದರು.

ತುಮಕೂರು ಜಿಲ್ಲೆಯ ಕುಣಿಗಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ರಂಗನಾಥ್, ಆರ್‌ಎಸ್‌ಎಸ್ ಗೀತೆ 'ನಮಸ್ತೆ ಸದಾ ವತ್ಸಲೇ'ದ ಆರಂಭಿಕ ಸಾಲುಗಳನ್ನು ಹಾಡಿದರು. ಈ ಗೀತೆ 'ತುಂಬಾ ಒಳ್ಳೆಯ ಹಾಡು'. ವಿಧಾನಸಭೆಯಲ್ಲಿ ಉಪಮುಖ್ಯಮಂತ್ರಿ ಅದನ್ನು ಹಾಡಿದ ನಂತರ ನಾನು ಅದನ್ನು ಕೇಳಿದೆ' ಎಂದು ಹೇಳಿದರು.

'ನಾನು ಅದರ ಅರ್ಥವನ್ನು ಓದಿದ್ದೇನೆ. ನಾವು ಹುಟ್ಟಿದ ಭೂಮಿಗೆ ನಮಸ್ಕರಿಸಬೇಕು ಎಂದು ಅದು ಹೇಳುತ್ತದೆ. ಅದರಲ್ಲಿ ನನಗೆ ಯಾವುದೇ ತಪ್ಪಿಲ್ಲ. ನಮ್ಮದು ಜಾತ್ಯತೀತ ಪಕ್ಷ ಮತ್ತು ನಾವು ಇತರರಿಂದ ಒಳ್ಳೆಯದನ್ನು ಸ್ವೀಕರಿಸಬೇಕು' ಎಂದು ಹೇಳಿದರು. ಬಿಜೆಪಿಯನ್ನು ಟೀಕಿಸಿದ ಅವರು, 'ಬಲಪಂಥೀಯರು ಜಾತಿ ಮತ್ತು ಧರ್ಮವನ್ನು ವಿಭಜಿಸಲು ಒತ್ತಾಯಿಸುತ್ತಾರೆ. ಅದನ್ನು ನಾವು ವಿರೋಧಿಸುತ್ತೇವೆ. ಅವರ ಸಿದ್ಧಾಂತವು ನಮ್ಮ ಸಿದ್ಧಾಂತಕ್ಕೆ ಎಂದಿಗೂ ಹೊಂದಿಕೆಯಾಗುವುದಿಲ್ಲ. ಆದರೆ, ಯಾರಾದರೂ ಆರ್‌ಎಸ್‌ಎಸ್‌ನ ಹಾಡನ್ನು ಹಾಡಿದರೆ ತಪ್ಪೇ? ನಾನು ಈ ಪ್ರಶ್ನೆಯನ್ನು ಮಾತ್ರ ಕೇಳುತ್ತಿದ್ದೇನೆ' ಎಂದರು.

## ಬಿಹಾರ 'ಮತದಾರರ ಅಧಿಕಾರ ಯಾತ್ರೆ,'ಗೆ ಶಾಸಕರನ್ನು ಕರೆದೊಯ್ದ ಡಿ.ಕೆ



ಬೆಂಗಳೂರು: ಬಿಹಾರದಲ್ಲಿ ನಡೆಯುತ್ತಿರುವ ಮತದಾರರ ಅಧಿಕಾರ ಯಾತ್ರೆ,'ಯಲ್ಲಿ ಭಾಗವಹಿಸಲು ವಿಶೇಷ ವಿಮಾನದಲ್ಲಿ ಕರ್ನಾಟಕದ 10 ಕಾಂಗ್ರೆಸ್ ಶಾಸಕರನ್ನು ಕರೆದುಕೊಂಡು ಹೋದ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ರಾಹುಲ್ ಗಾಂಧಿ ಅವರನ್ನು ಮೆಚ್ಚಿಸಲು ಈ ಅವಕಾಶವನ್ನು ಬಳಸಿಕೊಂಡಿದ್ದಾರೆ.

ತಮ್ಮಲ್ಲಿರುವಂತೆ ಬಹುಪಾಲು ಶಾಸಕರಂತೆ ಶಿವಕುಮಾರ್ ಅವರಿಗೆ ಬೆಂಬಲವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಯಲ್ಲಿ ಹೇಳಿಕೊಂಡಿದ್ದರ ಹಿನ್ನೆಲೆಯಲ್ಲಿ ಶಾಸಕರನ್ನು ರಾಹುಲ್ ಗಾಂಧಿ ಅವರ ಮುಂದೆ ಹಾಜರುಪಡಿಸಿದ್ದಾರೆ.

ಉತ್ತಮ ಸಂಘಟಕ ಎಂದು ಪರಿಗಣಿಸಲ್ಪಟ್ಟ ಶಿವಕುಮಾರ್ ಅವರ ಈ ನಡೆ ಪಕ್ಷದ ಮುಖ್ಯಸ್ಥರನ್ನು, ವಿಶೇಷವಾಗಿ ರಾಹುಲ್ ಗಾಂಧಿಯನ್ನು ಮೆಚ್ಚಿಸುವ ಉದ್ದೇಶದಿಂದ ನಡೆಸಲಾಗಿದೆ ಎಂದು ವ್ಯಾಖ್ಯಾನಿಸಲಾಗಿದೆ.

ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ 'ಮತ ಕಳ್ಳತನ' ವಿಷಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ, ಬಿಜೆಪಿ ಮತ್ತು ಭಾರತದ ಚುನಾವಣಾ ಆಯೋಗದ ವಿರುದ್ಧ ಹೋರಾಟ ಆರಂಭಿಸಿದ್ದಾರೆ. ಇತ್ತೀಚೆಗೆ ಕರ್ನಾಟಕ ವಿಧಾನಸಭೆಯಲ್ಲಿ ಆರ್‌ಎಸ್‌ಎಸ್ ಗೀತೆಯನ್ನು ಪಠಿಸಿದ್ದಕ್ಕಾಗಿ ಅವರ ವಿರೋಧಿಗಳಿಂದ ಟೀಕೆಗಳು ಬಂದ ಹಿನ್ನೆಲೆಯಲ್ಲಿ, ಅವರು ಪಕ್ಷದ ಸಿದ್ಧಾಂತಕ್ಕೆ ಬದ್ಧರಾಗಿರುತ್ತಾರೆ ಎಂಬ ಸಂದೇಶವನ್ನು ಕಳುಹಿಸುವುದು ಇದರ ಉದ್ದೇಶವಾಗಿದೆ.

INDIA ಬಣದಲ್ಲಿರುವ ಕಾಂಗ್ರೆಸ್ ಮಿತ್ರಪಕ್ಷಗಳ ಗಮನ ಸೆಳೆಯುವ ಸಾಧ್ಯತೆಯೂ ಇದೆ. 2024 ರ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಅಧಿಕಾರದಲ್ಲಿದ್ದರೂ ಮತದಾರರ ಕಳ್ಳತನವನ್ನು ತಡೆಯಲು ಸಾಧ್ಯವಾಗದ ಕಾರಣ ಕಾಂಗ್ರೆಸ್ ಸರ್ಕಾರದ ಕಡೆಯಿಂದಲೂ ಲೋಪಗಳಾಗಿವೆ ಎಂದು ಮಾಜಿ ಸಹಕಾರ ಸಚಿವ ಕೆ.ಎನ್. ರಾಜಣ್ಣ ಟೀಕಿಸಿದ್ದರು.

ಸಮಾಜವಾದಿ ಪಕ್ಷದ ನಾಯಕ ಮತ್ತು ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಅಖಿಲೇಶ್ ಯಾದವ್ ಅವರು ಮಾಜಿ ಮುಖ್ಯಮಂತ್ರಿಯನ್ನು ಟೀಕಿಸಿದ್ದರಿಂದ ರಾಹುಲ್ ಗಾಂಧಿ ಅವರನ್ನು ಕೆರಳಿಸಿದೆ. ಅದಕ್ಕಾಗಿಯೇ ರಾಹುಲ್ ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸ್ಪಷ್ಟ ಸೂಚನೆ ನೀಡಿದ್ದಾರೆ. ರಾಜಣ್ಣ ಅವರ ನಿರ್ಗಮನ ಸಿದ್ದರಾಮಯ್ಯ ಅವರಿಗೆ ಹಿನ್ನಡೆ ಎಂದು ವ್ಯಾಖ್ಯಾನಿಸಲಾಯಿತು. ಏತನ್ಮಧ್ಯೆ, ಸಿದ್ದರಾಮಯ್ಯ ಆಗಸ್ಟ್ 29 ರಂದು ಯಾತ್ರೆಗೆ ಸೇರಲಿದ್ದಾರೆ. ಸಿದ್ದರಾಮಯ್ಯ ತಮ್ಮ ಆಪ್ತ ಮತ್ತು ನಗರಾಭಿವೃದ್ಧಿ ಮತ್ತು ಪಟ್ಟಣ ಯೋಜನಾ ಸಚಿವ ಬೈರತಿ ಸುರೇಶ್ ಸೇರಿದಂತೆ ಇತರರೊಂದಿಗೆ ವಿಶೇಷ ವಿಮಾನದಲ್ಲಿ ಹೋಗಲಿದ್ದಾರೆ. ಸಿದ್ದರಾಮಯ್ಯ ಅವರೊಂದಿಗೆ ಯಾರೆಲ್ಲಾ ಬರುತ್ತಾರೆ ಎಂಬುದು ಕುತೂಹಲಕಾರಿಯಾಗಿದೆ ಮತ್ತು ಅದನ್ನು ಶೀಘ್ರದಲ್ಲೇ ನಿರ್ಧರಿಸಲಾಗುವುದು ಎಂದು ಮೂಲವೊಂದು ತಿಳಿಸಿದೆ.

ಶಾಸಕರಾದ ಶ್ರೀನಿವಾಸ್ ಮಾನೆ, ಬಾಬಾಸಾಹೇಬ್ ಪಾಟೀಲ್, ರಾಜು ಸೇಟ್, ರಿಜ್ವಾನ್ ಅರ್ಷದ್, ಬಿಎಂ ನಾಗರಾಜ್, ನಯನಾ ಮೋಟಮ್ಮ , ಅಶೋಕ್ ಪಟ್ಟಣ, ಆನಂದ ಕಡೂರ್, ವೇಣುಗೋಪಾಲ ನಾಯಕ್, ಡಾ.ಎನ್‌.ಟಿ. ಶ್ರೀನಿವಾಸ್, ಬಸನಗೌಡ ಬಾದರ್ಲಿ, ಯುವ ಕಾಂಗ್ರೆಸ್ ಮಾಜಿ ರಾಷ್ಟ್ರೀಯ ಅಧ್ಯಕ್ಷ ಬಿ.ವಿ. ಶ್ರೀನಿವಾಸಗೌಡ, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥಗೌಡ ಸೇರಿದಂತೆ ಮುಖಂಡರು ಬಿಹಾರಕ್ಕೆ ತೆರಳಿದ್ದಾರೆ.

## ಪಿಎಂ, ಸಿಎಂ ಪದಚ್ಯುತಿ ಮಸೂದೆ: ಜಂಟಿ ಸಂಸದೀಯ ಸಮಿತಿ ಸೇರದಿರಲು AAP ನಿರ್ಧಾರ!

ನವದೆಹಲಿ: ಸತತ 30 ದಿನ ಜೈಲು ಶಿಕ್ಷೆಗೆ ಗುರಿಯಾದರೆ ಪ್ರಧಾನಿ, ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿ ಮತ್ತು ಸಚಿವರನ್ನು ಹುದ್ದೆಯಿಂದ ಪದಚ್ಯುತಿಗೊಳಿಸಲು ಅವಕಾಶ ಕಲ್ಪಿಸುವ ತಿದ್ದುಪಡಿ ಮಸೂದೆ ಪರಿಶೀಲಿಸುವ ಜಂಟಿ ಸಂಸದೀಯ ಸಮಿತಿಗೆ (JPC) ಸೇರದಿರಲು ಆಮ್ ಆದ್ಮಿ ಪಕ್ಷ ತೀರ್ಮಾನಿಸಿದೆ.

ಮಸೂದೆಗೆ ವಿರೋಧ ವ್ಯಕ್ತಪಡಿಸಿ ಜಂಟಿ ಸಂಸದೀಯ ಸಮಿತಿ ಸೇರಲ್ಲ ಎಂದು ತೃಣಮೂಲ ಕಾಂಗ್ರೆಸ್, ಸಮಾಜವಾದಿ ಪಕ್ಷ ಹೇಳಿದ್ದವು. ಇದೀಗ ಆಮ್ ಆದ್ಮಿ ಪಕ್ಷ ಕೂಡಾ JPC ಸೇರಲ್ಲ ಎಂದು ಹೇಳಿದೆ.

ವಿರೋಧ ಪಕ್ಷಗಳ ಸರ್ಕಾರಗಳನ್ನು ಉರುಳಿಸುವುದು ಪ್ರಸ್ತಾವಿತ ಮಸೂದೆಯ ಉದ್ದೇಶವಾಗಿದೆ. ಕೇಂದ್ರ ಸರ್ಕಾರ ತರಲು ಉದ್ದೇಶಿಸಿರುವ ಮೂರು ಮಸೂದೆಗಳು ಅಸಂವಿಧಾನಿಕವಾಗಿದ್ದು , ದೇಶದಲ್ಲಿ ಪ್ರಜಾಪ್ರಭುತ್ವವನ್ನು ಕೊನೆಗೊಳಿಸುತ್ತವೆ ಎಂದು AAP ರಾಜ್ಯಸಭಾ ಸದಸ್ಯ ಸಂಜಯ್ ಸಿಂಗ್ ಆರೋಪಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಸಂಜಯ್ ಸಿಂಗ್, ಜಂಟಿ ಸಂಸದೀಯ ಸಮಿತಿಗೆ ಯಾವುದೇ ಸದಸ್ಯರನ್ನು ನಾಮನಿರ್ದೇಶನ ಮಾಡದಿರಲು ತಮ್ಮ ಪಕ್ಷ ನಿರ್ಧರಿಸಿದೆ ಎಂದು ಹೇಳಿದ್ದಾರೆ. 'ಭ್ರಷ್ಟರ ನಾಯಕ ಭ್ರಷ್ಟಾಚಾರದ ವಿರುದ್ಧ ಮಸೂದೆ ತರುವುದು ಹೇಗೆ? ನಾಯಕರನ್ನು ನಕಲಿ ಪ್ರಕರಣಗಳಲ್ಲಿ ಸಿಲುಕಿಸಿ ಜೈಲಿಗೆ ಹಾಕುವುದು, ಸರ್ಕಾರಗಳನ್ನು ಉರುಳಿಸುವುದು ಈ ಮಸೂದೆಯ ಉದ್ದೇಶವಾಗಿದೆ ಎಂದು ಸಿಂಗ್ ಹಿಂದಿಯಲ್ಲಿ ಪೋಸ್ಟ್ ಮಾಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.